ಎಂ.ವಿ.ಸಿ. ಸಂಖ್ಯೆ: 355/2024
ಪಿ. ಡಬ್ಲ್ಯೂ: 1

<u>ದಿನಾಂಕ: 20-02-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.</u>

<u>ಪಾಟೀ ಸವಾಲು: 3 ನೇ ಎದುರುದಾರ ಪರ ವಕೀಲರಿಂದ:-</u>

ಅಪಘಾತದ ಸಮಯದಲ್ಲಿ ನಾನು ಆಟೋದಲ್ಲಿ ಬರುತ್ತಿದ್ದೆನು. ಸದರಿ ಅಪಘಾತವು ಮುಖಾಮುಖಿಯಾಗಿ ಆಗಿರುತ್ತದೆ ಎಂದರೆ ಸರಿ. ಅಪಘಾತದ ನಂತರ ನಾನು ಚಿಕಿತ್ಸೆಗಾಗಿ ಸರ್ಕಾರಿ ಮಲ್ಲೇಗೌಡ ಆಸ್ಪತ್ರೆಗೆ ಹೋಗಿರುತ್ತೇನೆ. ಸದರಿ ಆಸ್ಪತ್ರೆಯಲ್ಲಿ ನಾನು 4 ರಿಂದ 5 ದಿನ ಒಳರೋಗಿಯಾಗಿ ದಾಖಲಾಗಿದ್ದೆನು. ಈ ಬಗ್ಗೆ ನಾನು ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಾನು ಸದರಿ ಆಸ್ಪತ್ರೆಯಲ್ಲಿ ದಿನಾಂಕ:23.03.2024 ರಂದು ದಾಖಲಾಗಿ ದಿ:25.03.2024 ರಂದು ಬಿಡುಗಡೆಯಾಗಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-5 ಗಾಯದ ಪ್ರಮಾಣ ಪತ್ರದಲ್ಲಿ ನನ್ನ ಮೇಲಿನ ತುಟಿಗೆ ಮಾತ್ರ ಗಾಯ ಆಗಿರುತ್ತದೆ ಎಂದು ನಮೂದಾಗಿರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿದಾರರು ಸ್ವತಃ ನುಡಿಯುತ್ತಾರೆ ನನಗೆ ಇತರ ಗಾಯಗಳು ಕೂಡಾ ಆಗಿರುತ್ತದೆ. ನನಗೆ ವೈದ್ಯರ ಅಭಿಪ್ರಾಯದ ಪ್ರಕಾರ ಸಾಧಾ ಸ್ವರೂಪದ ಗಾಯಗಳು ಮಾತ್ರ ಆಗಿರುತ್ತದೆ ಎಂದರೆ ಸರಿಯಲ್ಲ. ನನಗೆ ಸದರಿ ಆಸ್ಪತ್ರೆಯಲ್ಲಿ ಯಾವುದೇ ಶಸ್ತ್ರ ಚಿಕಿತ್ಸೆ ಆಗಿರುವುದಿಲ್ಲ ಎಂದರೆ ಸರಿ. ನಾನು ದಿ: 16.04.2024 ರಂದು ಹೊರತುಪಡಿಸಿ ನಾನು ಹೊರರೋಗಿಯಾಗಿ ಮುಂದುವರಿದ ಚಿಕಿತ್ಸೆಯನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ.

ನಾನು Scrap business ಮಾಡುತ್ತಿದ್ದೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ತಿಂಗಳಿಗೆ 30 ಸಾವಿರ

ರೂಪಾಯಿ ಆದಾಯ ಬರುತ್ತಿತ್ತು ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಅಪಘಾತವು ನನ್ನ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ಸತ್ಯವನ್ನು ಮುಚ್ಚಿಟ್ಟು ಎದುರುದಾರ ವಾಹನದ ಚಾಲಕನ ವಿರುದ್ಧ ಒಂದು ಸುಳ್ಳು ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಅಪಘಾತವು ರಸ್ತೆಯ ಮಧ್ಯಭಾಗದಲ್ಲಿ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಎಂ.ಎ.ಸಿ.ಟಿ., ಚಿಕ್ಕಮಗಳೂರು.

ಎಸ್ಆರ್ಃ